Malnourishnent in Gulbarga

ಚುಕ್ಕೆ ಗುರುತಿಲ್ಲದ : ಪ್ರಶ್ನೆ ಸಂಖ್ಯೆ 15 (2)

ಡಾ: ಶರಣ ಪ್ರಕಾಶ್ ರುದ್ರಪ್ಪ ಪಾಟೀಲ್ (ಸೇಡಂ)

a) Whether it has come to the notice of the Government that lorge number of cases of malnourishsment are detected in Gulbarga District, if so, action taken by the Government to tackle this problem (details be provided);

b) Whether the Government is aware that large number of Dengue cases are reported in Gulbarge District; if so, how many death cases have been reported; what are the remedial action taken by the Government;

c) Whether the Government will announce compensation to Dengue cases for treatment and for death?

ಶ್ರೀ ಅರವಿಂದ ಲಿಂಬಾವಳಿ

(ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

a) ಹೌದು.

ಒಟ್ಟಾರೆ ವರದಿಯಾಗಿರುವ 3,19,987 ಪ್ರಕರಣಗಳ ಪೈಕಿ, 0–6 ವಯಸ್ಸಿನ 4286 ಮಕ್ಕಳು ತೀವ್ರ ಅಪೌಷ್ಟಿಕತೆಗೆ ಒಳಗಾಗಿರುವರು. ಈ ಅಪೌಷ್ಟಿಕತೆಯ ಪ್ರಕರಣಗಳನ್ನು ಕಡಿಮೆಗೊಳಿಸಲು ಆರೋಗ್ಯ ಇಲಾಖೆಯು ಈ ಕೆಳಕಂಡ ಕ್ರಮಗಳನ್ನು ತೆಗೆದುಕೊಂಡಿದೆ.

ಆರೋಗ್ಯಾಧಿಕಾರಿಗಳು 3 ತಿಂಗಳಿಗೊಮ್ಮೆ ಅಂಗನವಾಡಿ ಕೇಂದ್ರಗಳಲ್ಲಿ ನಿಯಮಿತವಾಗಿ 2,73,061 ಮಕ್ಕಳ ಆರೋಗ್ಯ ತಪಾಸಣೆ ನಡೆಸಲಾಗಿರುತ್ತದೆ.

ತೀವ್ರ ಅಪೌಷ್ಟಿಕತೆಗೆ ಒಳಗಾದ 1493 ಮಕ್ಕಳನ್ನು ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗಳಲ್ಲಿ 2 ತಿಂಗಳಿಗೊಮ್ಮೆ ತಪಾಸಣೆಗೊಳಪಡಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಇನ್ನೂ ಹೆಚ್ಚಿನ ಶುಶ್ರೂಷೆ ಅಗತ್ಯವಿದ್ದ 26 ಮಕ್ಕಳನ್ನು ಗುಲ್ಬರ್ಗಾ ಜಿಲ್ಲಾ ಆಸ್ಪತ್ರೆಯ ಎನ್.ಆರ್.ಸಿ. ವಿಭಾಗಕ್ಕೆ. ಹಾಗೂ 43 ಮಕ್ಕಳನ್ನು ಬಾಲ ಸಂಜೀವಿನಿ

ಕಾರ್ಯಕ್ರಮದಡಿ ಬಸವೇಶ್ವರ ಆಸ್ಪತ್ರೆ ಮತ್ತು ಸಂಗಮೇಶ್ವರ ಆಸ್ಪತ್ರೆಗೆ ಕಳುಹಿಸಲಾಗಿದೆ.

b) ಹೌದು.

ಗುಲ್ಬರ್ಗ ಜಿಲ್ಲೆಯಲ್ಲಿ 2012 ನೇ ಸಾಲಿನಲ್ಲಿ 30.11.2012 ರವರೆಗೆ ಒಟ್ಟು 838 ಸಂಶಯಾಸ್ಪದ ಡೆಂಗಿ ಪ್ರಕರಣಗಳು ವರದಿಯಾಗಿದ್ದು, ಅವುಗಳಲ್ಲಿ, 828 ಪ್ರಕರಣಗಳ ರಕ್ತಮಾದರಿಗಳನ್ನು ಸಂಗ್ರಹಿಸಿ ಪರೀಕ್ಷಿಸಲಾಗಿ, ಇವುಗಳಲ್ಲಿ 30 ಪ್ರಕರಣಗಳು ಡೆಂಗಿಜ್ವರ ಎಂದು ಖಚಿತಪಟ್ಟಿರುತ್ತವೆ.

ಗುಲ್ಬರ್ಗ ಜಿಲ್ಲೆಯಲ್ಲಿ 2012ನೇ ಸಾಲಿನಲ್ಲಿ 30.11.2012 ರವರೆಗೆ ಯಾವುದೇ ಡೆಂಗಿ ಮರಣ ಸಂಭವಿಸಿರುವ ಪ್ರಕರಣಗಳು ವರದಿಯಾಗಿರುವುದಿಲ್ಲ.

ಗುಲ್ಬರ್ಗ ಜಿಲ್ಲೆಯಲ್ಲಿ ಡೆಂಗಿ ನಿಯಂತ್ರಣಕ್ಕಾಗಿ ಕೈಗೊಂಡ ಕ್ರಮಗಳು:

- ಕೈಗೊಳ್ಳಬೇಕಾದ ಚಟುವಟಿಕೆಗಳ ಮಾಹೆವಾರು ಕ್ರಿಯಾ ಯೋಜನೆಯನ್ನು ತಯಾರಿಸಿ ಎಲ್ಲಾ ಹಂತದಲ್ಲಿಯೂ ಈ ಕ್ರಿಯಾ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.
- 2012–13 ನೇ ಸಾಲಿನಲ್ಲಿ ಡೆಂಗಿ ನಿಯಂತ್ರಣಕ್ಕಾಗಿ ಗುಲ್ಬರ್ಗ ಜಿಲ್ಲೆಗೆ ಒಟ್ಟು ರೂ.6,92,000 ಅನುದಾನವನ್ನು ಎನ್‌ಆರ್‌ಹೆಚ್‌ಎಂ–ಎನ್‌ವಿಬಿಡಿಸಿಪಿ ಅಡಿಯಲ್ಲಿ ಬಿಡುಗಡೆ ಮಾಡಲಾಗಿದೆ.
- ಡೆಂಗಿ ನಿಯಂತ್ರಣಕ್ಕಾಗಿ ತುರ್ತು ಕ್ರಮವಾದ ಧೂಮೀಕರಣ ಕಾರ್ಯವನ್ನು ಕೈಗೊಳ್ಳಲು ಬೇಕಾದ ಪೈರಿತ್ರಮ್ ಕೀಟನಾಶಕವನ್ನು ಕೊಳ್ಳಲು ಜಿಲ್ಲೆಗೆ ರೂ.50,000 ಮೊತ್ತವನ್ನು ಬಿಡುಗಡೆ ಮಾಡಲಾಗಿದೆ.
- ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಆಯುಷ್ ಸೇವೆಗಳು ಅವರಿಂದ ಜಿಲ್ಲಾಧಿಕಾರಿ ಮತ್ತು ಮುಖ್ಯ ಕಾರ್ಯ ನಿರ್ವಹಣಾಧಿಕಾರಿ

ಅವರುಗಳಿಗೆ ಪತ್ರ ಬರೆದು ಜಿಲ್ಲೆಯಲ್ಲಿ ಡೆಂಗಿ ರೋಗದ ಸ್ಥಿತಿಗತಿ ಮತ್ತು ಅವುಗಳ ನಿಯಂತ್ರಣಕ್ಕಾಗಿ ಕೈಗೊಂಡ ಕ್ರಮಗಳನ್ನು ಸತತವಾಗಿ ಪರಿಶೀಲಿಸಲು ಸೂಚಿಸಲಾಗಿದೆ.

- ಈಡಿಸ್ ಲಾರ್ವಾ ಸಮೀಕ್ಷೆ ಮತ್ತು ನಿರ್ಮೂಲನಾ ಕಾರ್ಯಗಳು ಡೆಂಗಿ ನಿಯಂತ್ರಣದ ಪ್ರಮುಖ ನಿಯಂತ್ರಣ ಕ್ರಮವಾಗಿದ್ದು, ಈಗಾಗಲೇ ಗುಲ್ಬರ್ಗಾ ಜಿಲ್ಲೆಯಲ್ಲಿ ಈ ಚಟುವಟಿಕೆಯನ್ನು ಮೂರು ಸುತ್ತುಗಳಲ್ಲಿ 30 ಸಮಸ್ಯಾತ್ಮಕ ಗ್ರಾಮಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಪೂರ್ಣಗೊಳಿಸಲಾಗಿದೆ.
- ಈಡಿಸ್ ಲಾರ್ವಾ ಸಮೀಕ್ಷೆ ಮತ್ತು ನಿರ್ಮೂಲನಾ ಕಾರ್ಯವನ್ನು ಉಳಿದ ಗ್ರಾಮಗಳಲ್ಲಿಯೂ ಸಹ ಮುಂದುವರಿಸಲಾಗುತ್ತಿದೆ.
- ಘನ ತ್ಯಾಜ್ಯ ವಸ್ತುಗಳ ಸೂಕ್ತ ವಿಲೇವಾರಿ ಮತ್ತು ತಿಳುವಳಿಕಾ ಶಿಬಿರಗಳನ್ನು 110 ಆಯ್ದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಡೆಸಲಾಗುತ್ತಿದೆ.
- 15 ಗ್ರಾಮ ಪಂಚಾಯಿತಿಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳು ಮತ್ತು ಶಾಲೆಗಳನ್ನು ಒಳಗೊಂಡು ಅಡ್ಡೊಕೆಸಿ ಸಭೆಗಳನ್ನು ನಡೆಸಲಾಗುತ್ತಿದೆ.
- ಜಿಲ್ಲಾ ಮುಖ್ಯ ಕಾರ್ಯನಿರ್ವಾಕರ ಅಧ್ಯಕ್ಷತೆಯಲ್ಲಿ ಎಲ್ಲಾ ತಾಲ್ಲೂಕು ಆರೋಗ್ಯಾಧಿಕಾರಿಗಳು ಮತ್ತು ತಾಲ್ಲೂಕು ಕಾರ್ಯನಿರ್ವಹಣಾಧಿಕಾರಿಗಳ ಸಭೆಯನ್ನು ಕರೆದು ಡೆಂಗಿ ನಿಯಂತ್ರಣಕ್ಕಾಗಿ ಎಲ್ಲಾ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಲಾಗಿದೆ. ಅಲ್ಲದೆ, ದಿ: 20.9.2012 ರಿಂದ 27.9.12 ರವರೆಗೆ "ಗ್ರಾಮ ಸ್ವಚ್ಛತಾ ಸಪ್ತಾಹ"ವನ್ನು ಆಚರಿಸುವಂತೆಯೂ ಸಹ ಸೂಚಿಸಲಾಗಿತ್ತು.
- ಡೆಂಗಿ ರೋಗಿಗಳ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಯಲ್ಲಿ 10 ಹಾಸಿಗೆಗಳ ವಾರ್ಡನ್ನು ಪ್ರತ್ಯೇಕವಾಗಿ ಮೀಸಲಿಡಲಾಗಿದೆ.
- ಡೆಂಗಿ ನಿಯಂತ್ರಣದ ಬಗ್ಗೆ ಆಕಾಶವಾಣಿ ಮತ್ತು ಎಫ್ ಎಂ ರೇಡಿಯೋಗಳಲ್ಲಿ ಫೋನ್-ಇನ್ ಕಾರ್ಯಕ್ರಮ ಮತ್ತು ದೂರದರ್ಶನದಲ್ಲಿ ಚರ್ಚಾಕೂಟಗಳನ್ನು ಏರ್ಪಡಿಸಿ, ಇದನ್ನು ಜಿಲ್ಲಾಧಿಕಾರಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ

ಮತ್ತು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಅವರುಗಳು ನಡೆಸಿಕೊಟ್ಟಿರುತ್ತಾರೆ.

c) ಡೆಂಗಿ ಮರಣ ಪ್ರಕರಣಗಳಿಗೆ ಕಾರ್ಯಕ್ರಮದಡಿಯಲ್ಲಿ ಪರಿಹಾರ ನೀಡುವ ಅವಕಾಶವಿರುವುದಿಲ್ಲ. ಆದರೆ, ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಡೆಂಗಿ ರೋಗಿಗಳಿಗೆ ಉಚಿತವಾಗಿ ಚಿಕಿತ್ಸೆ ನೀಡಲಾಗುತ್ತದೆ.

ಮೂಲಸೌಲಭ್ಯಗಳ ಕೊರತೆ

ಪ್ರಶ್ನೆ ಸಂಖ್ಯೆ 13 (6)
ಶ್ರೀ ಡಾ॥ ಮಾಲಕರೆಡ್ಡಿ ಎ.ಬಿ. (ಯಾದಗಿರಿ)

ಅ) ಯಾದಗಿರಿ ಜಿಲ್ಲಾ ಕೇಂದ್ರದಲ್ಲಿರುವ ಸರ್ಕಾರಿ ಪದವಿ ಕಾಲೇಜು ಮೂಲ ಸೌಲಭ್ಯಗಳಿಂದ ವಂಚಿತವಾಗಿದ್ದು, ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು(ವಿವರ ನೀಡುವುದು);

ಇ) ಕಾಲೇಜಿನಲ್ಲಿ ಕೊಠಡಿಗಳ ಕೊರತೆ, ಉಪನ್ಯಾಸಕರ ಕೊರತೆ ಹಾಗೂ ಪ್ರಯೋಗಾಲಯ ಸಮಸ್ಯಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಯಾದಗಿರಿಯಲ್ಲಿ ನೂತನವಾಗಿ ಸ್ನಾತಕೋತ್ತರ ಕೇಂದ್ರ ಪ್ರಾರಂಭಿಸಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಕೊಠಡಿಗಳು, ಪೂರ್ಣಕಾಲಿಕ ಉಪನ್ಯಾಸಕರು, ಪ್ರಯೋಗಾಲಯ, ಇನ್ನಿತರೆ ಮೂಲಭೂತ ಸೌಕರ್ಯಗಳು ಇಲ್ಲದಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಬಂದಿದ್ದಲ್ಲಿ, ಈ ಸಮಸ್ಯೆಗಳ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ಒದಗಿಸುವುದು)